31

ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY RESEARCH AND REFERENCE BRANCH**

ಪತ್ರಿಕಾ ತುಣುಕುಗಳು

**PAPER CLIPPINGS**

ಇಲಾಖೆ / ವಿಷಯ : DEPARTMENT / SUBJECT: ಇತರ ರಾಜ್ಯಗಳ ಮಾಹಿತಿ

ಪತ್ರಿಕೆಯ ಹೆಸರು : NAME OF THE NEWS PAPER: ವಿಜಯವಾಣಿ ದಿನಾಂಕ : DATE :3/6/





ಅಸ್ಸಾಂನ ಕರೀಂಗಂಜ್ ಪ್ರದೇಶದಲ್ಲಿ ಭೂಕುಸಿತ ಸಂಭವಿಸಿದ್ದು, ಸ್ಥಳದಲ್ಲಿ ರಕ್ಷಣಾ ಕಾರ್ಯ ಕೈಗೊಂಡಿರುವ ಸ್ಥಳೀಯರು.

ದಿನಾ: 03.06.2020

# ಅಸ್ಸಾಂ ಸರಣಿ ಭೂಕುಸಿತಕ್ಕೆ 20 ಜನರು ಬಲಿ

**ಗುವಾಹಟಿ:** ಅಸ್ಸಾಂನಲ್ಲಿ ಭಾರಿ ಮಳೆ ಪರಿಣಾಮ ಮಂಗಳವಾರ ಸಂಭವಿಸಿದ ಸರಣಿ ಭೂಕುಸಿತದಲ್ಲಿ 20ಕ್ಕೂ ಹೆಚ್ಚು ಜನ ಮೃತರಾಗಿ, ಅನೇಕ ಮಂದಿ ಗಾಯಗೊಂಡಿದ್ದಾರೆ. ಮೃತರಲ್ಲಿ ಹೆಚ್ಚಿನವರು ದಕ್ಷಿಣ ಅಸ್ಸಾಂನ ಬರಾಕ್ ಕಣಿವೆಯ ಮೂರು ಜಿಲ್ಲೆಗಳಿಗೆ ಸೇರಿದವರು. ಭೂಕುಸಿತ ಪ್ರದೇಶಗಳಿಗೆ ರಕ್ಷಣಾ ಹಾಗೂ ಪರಿಹಾರ ತಂಡಗಳು ಧಾವಿಸಿವೆ. ಕಚಾರ್ ಮತ್ತು ಹೈಲ್‌ಕಂಡಿ ಜಿಲ್ಲೆಯಲ್ಲಿ ತಲಾ ಏಳು ಹಾಗೂ ಕರೀಂಗಂಜ್ ಜಿಲ್ಲೆಯಲ್ಲಿ ಆರು ಜನರು ಸಾವಿಗೀಡಾಗಿದ್ದಾರೆ. ಬರಾಕ್ ಕಣಿವೆ ಪ್ರದೇಶದಲ್ಲಿ ಕಳೆದ ಕೆಲವು ದಿನಗಳಿಂದ ಭಾರಿ ಮಳೆಯಾಗುತ್ತಿದೆ. ರಾಜ್ಯ ಈಗಾಗಲೇ ಭಾರಿ ಪ್ರವಾಹದಿಂದ ನಲುಗುತ್ತಿದ್ದು ಸುಮಾರು 3.72 ಲಕ್ಷ ಜನರು ಸಂತ್ರಸ್ತರಾಗಿದ್ದಾರೆ. ಗೋಲ್‌ಪಾರಾ, ನೌಗಾಂವ್ ಮತ್ತು ಹೊಜಾಯ್ ಜಿಲ್ಲೆಗಳಲ್ಲಿ ಹೆಚ್ಚಿನ ಹಾನಿ ಸಂಭವಿಸಿದೆ. ಇಲ್ಲಿ ಆರು ಜನರು ಮೃತಪಟ್ಟಿದ್ದಾರೆ. 348 ಗ್ರಾಮಗಳು ಜಲಾವೃತವಾಗಿವೆ. 27,000 ಎಕರೆ ಪ್ರದೇಶದಲ್ಲಿ ಬೆಳೆ ನಷ್ಟವಾಗಿದೆ ಎಂದು ಅಸ್ಸಾಂ ರಾಜ್ಯ ವಿಪತ್ತು ನಿರ್ವಹಣಾ ಪ್ರಾಧಿಕಾರದ ಅಧಿಕಾರಿಗಳು ತಿಳಿಸಿದ್ದಾರೆ.